ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಹೊಸದಾಗಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯಾಗಿ ಮೇಲ್ದರ್ಜೆಗೇರಿಸಲಾದ ಪಟ್ಟಣಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

653 (757) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಹೊಸದಾಗಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯಾಗಿ ಮೇಲ್ದರ್ಜೆಗೇರಿಸಲಾದ ಪಟ್ಟಣಗಳಾವುವು; ಈ ಪುರಸಭೆ ವ್ಯಾಪ್ತಿಗೆ ಸೇರ್ಪಡೆಗೊಂಡ ಎಲ್ಲಾ ಜನವಸತಿ ಪ್ರದೇಶಗಳಿಗೆ ಒಳಚರಂಡಿ ಯೋಜನೆಗಳನ್ನು ಮಂಜೂರು ಮಾಡಲಾಗಿದೆಯೇ; ಅವುಗಳ ಪ್ರಗತಿ ಏನು; (ವಿವರ ನೀಡುವುದು)

(ಆ) ಪುರಸಭೆವಾರು ಭೌತಿಕ ಮತ್ತು ಆರ್ಥಿಕ ಪ್ರಗತಿಯ ಮಾಹಿತಿ ನೀಡುವುದು;

(ಇ) ಮಂಡ್ಯ ಜಿಲ್ಲೆ ನಾಗಮಂಗಲ ಪುರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ ಮಂಜೂರು ಮಾಡಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಈ) ಪುರಸಭೆ ವ್ಯಾಪ್ತಿಗೆ ಹೊಸದಾಗಿ ಒಳಪಟ್ಟ ಜನವಸತಿ ಪ್ರದೇಶಗಳಿಗೆ ಒಳಚರಂಡಿ ಕಲ್ಪಿಸಲು ಯೋಜನೆಯನ್ನು ಸರ್ಕಾರ ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಕಾರ್ಯ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು? (ಯೋಜನೆಯ ಸಂಪೂರ್ಣ ವಿವರ ನೀಡುವುದು)